**All India Radio: Bangalore**
**National Bulletin In Kannada**
**07.03.2026 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**07.03.2026 1.10 p.m.**

**<><><><>**

ಮುಖ್ಯಾಂಶಗಳು

1. ಜಾಗತಿಕ ಸಾಮರ್ಥ್ಯ ಕೇಂದ್ರಗಳಿಗೆ ಶಕ್ತಿ ಕೇಂದ್ರವಾಗಿ ಹೊರಹೊಮ್ಮಿದ ಭಾರತ - ಕೇಂದ್ರ ಸಚಿವ ರಾಮ್ ಮೋಹನ್ ನಾಯ್ಡು
2. ಗೃಹ ಬಳಕೆಯ ಅಡುಗೆ ಅನಿಲ ಸಿಲಿಂಡರ್ ದರ ೬೦ ರೂಪಾಯಿ ಏರಿಕೆ
3. ನೇಪಾಳ ಸಾರ್ವತ್ರಿಕ ಚುನಾವಣೆ: ಭರ್ಜರಿ ಗೆಲುವಿನತ್ತ ಬಾಲೇಂದ್ರ ಶಾ ನೇತೃತ್ವದ ಆರ್‌ಎಸ್‌ಪಿ
4. ಆಲ್ ಇಂಗ್ಲೆಂಡ್ ಒಪನ್ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್: ಪುರುಷರ ಸಿಂಗಲ್ಸ್ ವಿಭಾಗದ ಸೆಮಿಫೈನಲ್‌ನಲ್ಲಿಂದು ಲಕ್ಷ್ಯ ಸೇನ್ - ವಿಕ್ಟರ್ ಲೈ ಮುಖಾಮುಖಿ

<><><><>

ಏರ್‌ಬಸ್ ಸಂಸ್ಥೆಯು ಯೂರೋಪ್‌ನ ಹೊರಗೆ ಭಾರತದಲ್ಲಿ ತನ್ನ ಎರಡನೇ ಅತಿದೊಡ್ಡ ಡಿಜಿಟಲ್ ಕೇಂದ್ರವನ್ನು ಸ್ಥಾಪಿಸಿದೆ. ಈ ಮೂಲಕ ಭಾರತ ಜಾಗತಿಕ ಸಾಮರ್ಥ್ಯ ಕೇಂದ್ರಗಳಿಗೆ ಶಕ್ತಿ ಕೇಂದ್ರವಾಗಿ ಹೊರಹೊಮ್ಮಿದೆ ಎಂದು ನಾಗರಿಕ ವಿಮಾನಯಾನ ಸಚಿವ ರಾಮ್ ಮೋಹನ್ ನಾಯ್ಡು ಹೇಳಿದ್ದಾರೆ. ಕರ್ನಾಟಕದ ಬೆಂಗಳೂರಿನಲ್ಲಿಂದು ಏರ್‌ಬಸ್ ಇಂಡಿಯಾ ತಂತ್ರಜ್ಞಾನ ಕೇಂದ್ರದ ಉದ್ಘಾಟನಾ ಸಮಾರಂಭದಲ್ಲಿ ವರ್ಚುವಲ್ ಮೂಲಕ ಭಾಗವಹಿಸಿದ ಸಚಿವರು, ದೇಶದ ಕೌಶಲ್ಯಪೂರ್ಣ ಮತ್ತು ಯುವ ಕಾರ್ಯಪಡೆಯಿಂದ ನಡೆಸಲ್ಪಡುವ, ಸುಧಾರಿತ ಎಂಜಿನಿಯರಿಂಗ್ ಮತ್ತು ನಾವೀನ್ಯತೆ ಕೇಂದ್ರಗಳನ್ನು ಹೊಂದಿರುವ ನೂತನ ಏರ್‌ಬಸ್ ಕ್ಯಾಂಪಸ್, ಜಾಗತಿಕ ಸಾಮರ್ಥ್ಯ ಕೇಂದ್ರಗಳ ಶಕ್ತಿ ಕೇಂದ್ರವಾಗಿ ದೇಶದ ಬೆಳೆಯುತ್ತಿರುವ ಬಲಕ್ಕೆ ಸಾಕ್ಷಿಯಾಗಿದೆ ಎಂದು ಅಭಿಪ್ರಾಯಪಟ್ಟರು. ಈ ಸೌಲಭ್ಯವು ದೇಶದ ಪ್ರತಿಭೆಗಳಿಗೆ ವಿಶ್ವಾದ್ಯಂತ ವಾಣಿಜ್ಯ ವಿಮಾನಗಳು ಮತ್ತು ಹೆಲಿಕಾಪ್ಟರ್‌ಗಳಿಗೆ ನಿರ್ಣಾಯಕ ವ್ಯವಸ್ಥೆಗಳನ್ನು ವಿನ್ಯಾಸಗೊಳಿಸಲು ಮತ್ತು

ಅಭಿವೃದ್ಧಿಪಡಿಸಲು ಅನುವು ಮಾಡಿಕೊಡುತ್ತದೆ ಎಂದು ಸಚಿವ ರಾಮ್ ಮೋಹನ್ ನಾಯ್ಡು ತಿಳಿಸಿದರು.

<><><><>

ನವದೆಹಲಿಯ ಮಾಣೆಕ್ ಷಾ ಕೇಂದ್ರದಲ್ಲಿ ನಾಳೆ ನಡೆಯಲಿರುವ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ರಾಷ್ಟ್ರೀಯ ಮಟ್ಟದ ಕಾರ್ಯಕ್ರಮದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರಧಾನ ಭಾಷಣ ಮಾಡಲಿದ್ದಾರೆ. ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯ ಆಯೋಜಿಸಿರುವ ಈ ಕಾರ್ಯಕ್ರಮದಲ್ಲಿ ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಅನ್ನಪೂರ್ಣಾದೇವಿ ಮತ್ತು ರಾಜ್ಯ ಸಚಿವೆ ಸಾವಿತ್ರಿ ಠಾಕೂರ್ ಭಾಗವಹಿಸಲಿದ್ದಾರೆ.  ಸಶಸ್ತ್ರ ಪಡೆಗಳು, ಪೊಲೀಸ್ ಮತ್ತು ಇತರ ವಲಯಗಳ ಪ್ರತಿನಿಧಿಗಳು ಸೇರಿದಂತೆ ೧೫೦ಕ್ಕೂ ಹೆಚ್ಚು ಸಚಿವಾಲಯಗಳು, ಇಲಾಖೆಗಳು ಮತ್ತು ಸಂಸ್ಥೆಗಳಿಂದ ಸುಮಾರು ಒಂದು ಸಾವಿರ ಮಹಿಳೆಯರು ಈ ಕಾರ್ಯಕ್ರಮದಲ್ಲಿ ಭಾಗವಹಿಸುವ ನಿರೀಕ್ಷೆ ಇದೆ ಎಂದು ಸಚಿವಾಲಯ ತಿಳಿಸಿದೆ. ಕಾರ್ಯಕ್ರಮದಲ್ಲಿ ಎರಡು ಸಂವಾದಗಳು ನಡೆಯಲಿದೆ. ಕಾರ್ಮಿಕ ಸಂಹಿತೆಗಳು - ಮಹಿಳೆಯರ ಸಬಲೀಕರಣವನ್ನು ಹೆಚ್ಚಿಸುವುದರ ಕುರಿತು ಮೊದಲ ಸಂವಾದ ಕೇಂದ್ರೀಕರಿಸಲಿದೆ. ಸ್ವಸಹಾಯ ಗುಂಪುಗಳ ಮಹಿಳೆಯರನ್ನು ಉದ್ಯಮಿಗಳಾಗಿ ಮಾಡುವ ನಿಟ್ಟಿನಲ್ಲಿ ಎರಡನೇ ಸಂವಾದದ ಚರ್ಚೆಗಳು ನಡೆಯಲಿವೆ. ಮಾರ್ಚ್ ೮ ರಂದು ಅಂತಾರಾಷ್ಟ್ರೀಯ ಮಹಿಳಾ ದಿನವನ್ನು ಜಾಗತಿಕವಾಗಿ ಆಚರಿಸಲಾಗುತ್ತಿದೆ. ಈ ದಿನವು ವಿವಿಧ ಕ್ಷೇತ್ರಗಳಲ್ಲಿ ಮಹಿಳೆಯರ ಸಾಧನೆಗಳು ಮತ್ತು ಕೊಡುಗೆಗಳು ಹಾಗೂ ಲಿಂಗ ಸಮಾನತೆ, ಸುರಕ್ಷತೆ, ಘನತೆ ಮತ್ತು ಮಹಿಳೆಯರ ಸಬಲೀಕರಣದ ಕಡೆಗೆ ಸಾಮೂಹಿಕ ಬದ್ಧತೆಯನ್ನು ಪುನರುಚ್ಚರಿಸುತ್ತದೆ.

<><><><>

ಪಶ್ಚಿಮ ಬಂಗಾಳದ ಸಿಲಿಗುರಿಯಲ್ಲಿ ಅಂತಾರಾಷ್ಟ್ರೀಯ ಸಂತಲ್ ಮಂಡಳಿಯು ಆಯೋಜಿಸಿರುವ ೯ನೇ ಅಂತಾರಾಷ್ಟ್ರೀಯ ಸಂತಲ್ ಸಮ್ಮೇಳನದಲ್ಲಿ  ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಗವಹಿಸಿದ್ದಾರೆ. ಇದಕ್ಕೂ ಮುನ್ನ ಪಶ್ಚಿಮ ಬಂಗಾಳದ ಬಾಗ್ಡೋಗ್ರಾಗೆ ಆಗಮಿಸಿದ ರಾಷ್ಟ್ರಪತಿಗಳನ್ನು ಕೇಂದ್ರ ಬುಡಕಟ್ಟು ವ್ಯವಹಾರಗಳ ರಾಜ್ಯ ಸಚಿವ ದುರ್ಗಾದಾಸ್ ಉಯಿಕಿ ಬರಮಾಡಿಕೊಂಡರು.

<><><><>

'ಜನೌಷಧಿ, ಅಗ್ಗ ಮತ್ತು ವಿಶ್ವಾಸಾರ್ಹ ಉಳಿತಾಯದ ಜೊತೆ, ಆರೋಗ್ಯ ಲಾಭ' ಎಂಬ ಧ್ಯೇಯದೊಂದಿಗೆ ಇಂದು ೮ನೇ ಜನೌಷಧಿ ವಾರ್ಷಿಕೋತ್ಸವ ಆಚರಿಸಲಾಗುತ್ತಿದೆ. ಬಡ ಹಾಗೂ ಮಧ್ಯಮ ವರ್ಗದ ಜನರಿಗೆ ಅಗ್ಗದ ದರದಲ್ಲಿ ಗುಣಮಟ್ಟದ ಔಷಧಗಳನ್ನು ಪ್ರಧಾನಮಂತ್ರಿ ಭಾರತೀಯ ಜನೌಷಧಿ ಪರಿಯೋಜನೆ ಅಡಿಯಲ್ಲಿ ಪ್ರಧಾನಮಂತ್ರಿ ಭಾರತೀಯ ಜನೌಷಧಿ ಕೇಂದ್ರಗಳ ಮೂಲಕ, ದೇಶಾದ್ಯಂತ ಒದಗಿಸುತ್ತಿದೆ. ಜನೌಷಧಿ ದಿನದ ಸಂದರ್ಭದಲ್ಲಿ ದೇಶವಾಸಿಗಳಿಗೆ ಪ್ರಧಾನಿ ನರೇಂದ್ರ ಮೋದಿ ಅವರು ಶುಭಾಶಯ ಕೋರಿದ್ದಾರೆ. ಜನೌಷಧಿ ಕೇಂದ್ರಗಳಿಂದ ಲೆಕ್ಕವಿಲ್ಲದಷ್ಟು ಕುಟುಂಬಗಳು ಆರೋಗ್ಯ ವೆಚ್ಚದಲ್ಲಿ ಉಳಿತಾಯ ಮಾಡುತ್ತಿವೆ ಮತ್ತು ಸರಿಯದ ಚಿಕಿತ್ಸೆ ಪಡೆಯುತ್ತಿವೆ. ನಾಗರಿಕರಿಗೆ ಕೈಗೆಟಕುವ ದರದಲ್ಲಿ ಗುಣಮಟ್ಟದ ಔಷಧಗಳು ಲಭ್ಯವಾಗುವಂತೆ ನೋಡಿಕೊಳ್ಳುವಲ್ಲಿ ಕೇಂದ್ರ ಸರ್ಕಾರದ ಬದ್ಧತೆಯನ್ನು ಈ ಉಪಕ್ರಮ ಪ್ರತಿಬಿಂಬಿಸುತ್ತದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

<><><>

ಸ್ಪೀಕರ್ ಓಂ ಬಿರ್ಲಾ ಅವರ ಪದಚ್ಯುತಿ ಕೋರಿ ಲೋಕಸಭೆಯಲ್ಲಿ ಇದೇ ಸೋಮವಾರ ನಿರ್ಣಯ ಮಂಡನೆಗೆ ಬರಲಿದೆ. ಬಜೆಟ್ ಅಧಿವೇಶನದ ಎರಡನೇ ಹಂತವು ಮಾರ್ಚ್ ೯ ರಂದು ಪ್ರಾರಂಭವಾಗಲಿದೆ. ಕಳೆದ ತಿಂಗಳು ನಡೆದ ಬಜೆಟ್ ಅಧಿವೇಶನದ ಮೊದಲ ಹಂತದಲ್ಲಿ, ವಿರೋಧ ಪಕ್ಷವು ಲೋಕಸಭಾ ಕಾರ್ಯದರ್ಶಿಗೆ ಸ್ಪೀಕರ್ ಅವರನ್ನು ಪದಚ್ಯುತಗೊಳಿಸುವಂತೆ ಕೋರಿ ಅವಿಶ್ವಾಸ ನಿರ್ಣಯದ ನೋಟಿಸ್ ಸಲ್ಲಿಸಿತ್ತು. ಸ್ಪೀಕರ್ ಪಕ್ಷಪಾತದಿಂದ ವರ್ತಿಸುತ್ತಿದ್ದಾರೆ ಎಂದು ಆರೋಪಿಸಿತ್ತು. ಇದಕ್ಕೆ ಕಾಂಗ್ರೆಸ್, ಸಮಾಜವಾದಿ ಪಕ್ಷ, ಡಿಎಂಕೆ, ಎಡಪಂಥೀಯ ಮತ್ತು ಇತರ ಸದಸ್ಯರು ಸೇರಿದಂತೆ ೧೧೮ ಸಂಸದರು ಸಹಿ ಹಾಕಿದ್ದರು. ಈ ನೋಟಿಸ್ ಅನ್ನು ಮೂವರು ಕಾಂಗ್ರೆಸ್ ಸದಸ್ಯರಾದ ಮೊಹಮ್ಮದ್ ಜಾವೇದ್, ಕೆ.ಸುರೇಶ್ ಮತ್ತು ಮಲ್ಲು ರವಿ ಮಂಡಿಸಲಿದ್ದಾರೆ. ಏತನ್ಮಧ್ಯೆ, ಬಿಜೆಪಿ ಮತ್ತು ಕಾಂಗ್ರೆಸ್ ತಮ್ಮ ಪಕ್ಷದ ಲೋಕಸಭಾ ಸಂಸದರಿಗೆ ವಿಪ್ ಜಾರಿ ಮಾಡಿದ್ದು, ಮಾರ್ಚ್ ೯ ಮತ್ತು ೧೦ ರಂದು ಸದನದಲ್ಲಿ ಹಾಜರಿರುವಂತೆ ನಿರ್ದೇಶಿಸಿವೆ.

<><><>

ತೈಲ ಕಂಪನಿಗಳು ಸಬ್ಸಿಡಿ ರಹಿತ ಗೃಹ ಬಳಕೆ ಅಡುಗೆ ಅನಿಲ ಸಿಲಿಂಡರ್ ದರವನ್ನು ೬೦ ರೂಪಾಯಿಗಳಷ್ಟು ಹೆಚ್ಚಿಸಿವೆ. ಇಂಡಿಯನ್ ಆಯಿಲ್ ಕಾರ್ಪೊರೇಷನ್ ಲಿಮಿಟೆಡ್ ಪ್ರಕಾರ, ದೆಹಲಿಯಲ್ಲಿ ೧೪.೨ ಕೆ.ಜಿ. ಅನಿಲ ಸಿಲಿಂಡರ್ ಬೆಲೆ ೮೫೩ ರೂಪಾಯಿಯಿಂದ ೯೧೩ ರೂಪಾಯಿಗೆ

ಹೆಚ್ಚಿಸಲಾಗಿದೆ.  ಇದೇ ವೇಳೆ ಮುಂಬೈನಲ್ಲಿ ಹೊಸ ಎಲ್‌ಪಿಜಿ ದರ ೯೧೨ ರೂಪಾಯಿ ೫೦ ಪೈಸೆ, ಕೋಲ್ಕತ್ತಾದಲ್ಲಿ ೯೩೯ ರೂಪಾಯಿ ಹಾಗೂ ಚೆನ್ನೈನಲ್ಲಿ ೯೨೮ ರೂಪಾಯಿ ೫೦ ಪೈಸೆಯಷ್ಟಾಗಿದೆ. ಅಡುಗೆ ಅನಿಲ ಸಿಲಿಂಡರ್‌ಗಳ ಪರಿಷ್ಕೃತ ಬೆಲೆಗಳು ಇಂದಿನಿಂದಲೇ ಜಾರಿಗೆ ಬರಲಿದೆ.

<><><><>

ಜೆನ್‌ಝಿ ಪ್ರತಿಭಟನೆಗಳ ನಂತರ ನೇಪಾಳದ ಮೊದಲ ಸಾರ್ವತ್ರಿಕ ಚುನಾವಣೆಯಲ್ಲಿ ಬಾಲೇಂದ್ರ ಶಾ ನೇತೃತ್ವದ ರಾಷ್ಟ್ರೀಯ ಸ್ವತಂತ್ರ ಪಕ್ಷ - ಆರ್‌ಎಸ್‌ಪಿ ಭರ್ಜರಿ ಗೆಲುವಿನತ್ತ ಸಾಗಿದೆ. ನೇಪಾಳದ ಚುನಾವಣಾ ಆಯೋಗದ ಪ್ರಕಾರ ಒಟ್ಟು ೧೬೫ ಕ್ಷೇತ್ರಗಳ ಪೈಕಿ ೧೬೧ ಕ್ಷೇತ್ರಗಳ ಫಲಿತಾಂಶ ಪ್ರಕಟಿಸಲಾಗಿದೆ. ಕಳೆದ ಗುರುವಾರ ನಡೆದ ಚುನಾವಣೆಯಲ್ಲಿ ಆರ್‌ಎಸ್‌ಪಿ ೨೭ ಸ್ಥಾನಗಳನ್ನು ಗೆದ್ದು, ಕಠ್ಮಂಡು ಜಿಲ್ಲೆಯ ಎಲ್ಲಾ ಹತ್ತು ಕ್ಷೇತ್ರಗಳಲ್ಲಿ ಕ್ಲೀನ್‌ಸ್ವೀಪ್ ಮಾಡಿದೆ. ನೇಪಾಳಿ ಕಾಂಗ್ರೆಸ್ ೫ ಸ್ಥಾನಗಳಲ್ಲಿ ಗೆಲುವು ಸಾಧಿಸಿದ್ದು, ನೇಪಾಳಿ ಕಮ್ಯೂನಿಸ್ಟ್ ಪಕ್ಷ ೨ ಹಾಗೂ ನೇಪಾಳದ ಕಮ್ಯುನಿಸ್ಟ್ ಪಕ್ಷ ಯುಎಂಎಲ್ ಒಂದು ಸ್ಥಾನದಲ್ಲಿ ಗೆದ್ದಿದೆ. ಇನ್ನು ೯೭ ಸ್ಥಾನಗಳಲ್ಲಿ ಆರ್‌ಎಸ್‌ಪಿ ಮುನ್ನಡೆಯಲ್ಲಿದೆ. ನೇಪಾಳಿ ಕಾಂಗ್ರೆಸ್, ನೇಪಾಳಿ ಕಮ್ಯೂನಿಸ್ಟ್ ಪಕ್ಷ ಮತ್ತು ಯುಎಂಎಲ್ ಪಕ್ಷಗಳು ತಲಾ ಹತ್ತು ಸ್ಥಾನಗಳಲ್ಲಿ ಮುನ್ನಡೆ ಸಾಧಿಸಿವೆ.

<><><><>

ಭಾರತೀಯ ರೈಲ್ವೆ ತನ್ನ ಜಾಲದ ವಿದ್ಯುದ್ಧೀಕರಣವನ್ನು ಸಮರೋಪಾದಿಯಲ್ಲಿ ಕೈಗೊಂಡಿದ್ದು, ಇದು ಆಮದು ಮಾಡಿಕೊಂಡ ಡೀಸಲ್ ಮೇಲಿನ ಅವಲಂಬನೆಯನ್ನು ಗಮನಾರ್ಹವಾಗಿ ತಗ್ಗಿಸಿದೆ. ಬ್ರಾಡ್‌ಗೇಜ್ ರೈಲು ಜಾಲದ ೯೯.೯ ಪ್ರತಿಶತ ಈಗ ವಿದ್ಯುದೀಕರಣಗೊಂಡಿದ್ದು, ಇದು ವಿಶ್ವದ ಅತಿ ದೊಡ್ಡ ಮೂಲಸೌಕರ್ಯ ಪರಿವರ್ತನೆಗಳಲ್ಲಿ ಒಂದಾಗಿದೆ. ಇದರಿಂದಾಗಿ ರೈಲ್ವೆಗೆ ದೇಶೀಯವಾಗಿ ಉತ್ಪಾದಿಸುವ ವಿದ್ಯುತ್ ಅನ್ನು ಹೆಚ್ಚು ಅವಲಂಬಿಸಲು ಸಾಧ್ಯವಾಗುತ್ತದೆ. ಇಂಧನ ಸುರಕ್ಷತೆಯನ್ನು ಸುಧಾರಿಸುತ್ತದೆ ಮತ್ತು ಜಾಗತಿಕ ತೈಲ ಮಾರುಕಟ್ಟೆಯಲ್ಲಿನ ಅನಿಶ್ಚಿತತೆಯ ಸವಾಲುಗಳನ್ನು ಎದುರಿಸಲು ಎದುರಿಸಲು ಸಾಧ್ಯವಾಗುತ್ತದೆ ಎಂದು ರೈಲ್ವೆ ಸಚಿವಾಲಯ ತಿಳಿಸಿದೆ.

<><><><>

ಪಶ್ಚಿಮ ಏಷ್ಯಾದಲ್ಲಿನ ಸಂಘರ್ಷ ಇಂದು ಎಂಟನೇ ದಿನಕ್ಕೆ ಕಾಲಿಟ್ಟಿದೆ. ಇರಾನ್ ಜೊತೆಗೆ ಯಾವುದೇ ಒಪ್ಪಂದ ಮಾಡಿಕೊಳ್ಳುವುದಿಲ್ಲ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಿಳಿಸಿದ್ದಾರೆ. ಇದೇ ವೇಳೆ ಬೇಷರತ್ ಶರಣಾಗತಿಗೆ ಇರಾನ್‌ಗೆ ಅವರು ಕರೆ ನೀಡಿದ್ದಾರೆ.  ಶರಣಾಗತಿಗೆ ಒಪ್ಪಿಕೊಂಡ

ನಂತರ ಇರಾನ್ ಅನ್ನು ಆರ್ಥಿಕವಾಗಿ ಪುನರ್‌ನಿರ್ಮಿಸಲು ಅಮೆರಿಕ ಮತ್ತು ಅದರ ಮಿತ್ರರಾಷ್ಟ್ರಗಳು, ಸಹಾಯ ಮಾಡಲು ಕೆಲಸ ಮಾಡಲಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಟ್ರಂಪ್ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಶ್ವೇತಭವನದ ಪತ್ರಿಕಾ ಕಾರ್ಯದರ್ಶಿ ಕ್ಯಾರೋಲಿನ್ ಲೀವಿಟ್, ಅಮೆರಿಕವು ಇರಾನ್ ವಾಯುಪ್ರದೇಶವನ್ನು ನಿಯಂತ್ರಿಸುವತ್ತ ಪ್ರಗತಿ ಸಾಧಿಸುತ್ತಿದೆ ಮತ್ತು ನಾಲ್ಕರಿಂದ ಆರು ವಾರಗಳಲ್ಲಿ ಗುರಿ ಸಾಧಿಸುವ ನಿರೀಕ್ಷೆಯಿದೆ ಎಂದು ಹೇಳಿದ್ದಾರೆ. ಈ ನಡುವೆ ಇರಾನ್ ಅಧ್ಯಕ್ಷ ಮಸೌದ್ ಪೆಜೆಶ್ಕಿಯನ್ ಮಾತನಾಡಿ, ಕೆಲವು ದೇಶಗಳು ಅಮೆರಿಕ ಮತ್ತು ಇಸ್ರೇಲ್ ಜೊತೆ ನಡೆಯುತ್ತಿರುವ ಸಂಘರ್ಷವನ್ನು ಪರಿಹರಿಸಲು ಮಧ್ಯಸ್ಥಿಕೆ ಪ್ರಯತ್ನಗಳನ್ನು ಪ್ರಾರಂಭಿಸಿವೆ ಎಂದು ತಿಳಿಸಿದ್ದಾರೆ.

<><><><>

ಬರ್ಮಿಂಗ್‌ಹ್ಯಾಮ್‌ನಲ್ಲಿಂದು ನಡೆಯಲಿರುವ ಆಲ್ ಇಂಗ್ಲೆಂಡ್ ಓಪನ್ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್‌ನ ಪುರುಷರ ಸಿಂಗಲ್ಸ್ ವಿಭಾಗದ ಸೆಮಿಫೈನಲ್‌ನಲ್ಲಿ ಭಾರತದ ಲಕ್ಷ್ಯ ಸೇನ್, ಕೆನಡಾದ ವಿಕ್ಟರ್ ಲೈ ಅವರನ್ನು ಎದುರಿಸಲಿದ್ದಾರೆ. ವಿಶ್ವದ ೧೨ನೇ ಶ್ರೇಯಾಂಕಿತ ಲಕ್ಷ್ಯ ಸೇನ್ ನಿನ್ನೆ ರಾತ್ರಿ ನಡೆದ ಕ್ವಾರ್ಟರ್ ಫೈನಲ್‌ನಲ್ಲಿ ಚೀನಾದ ಲಿ ಶಿಫೆಂಗ್ ಅವರನ್ನು ೨೧-೧೩, ೨೧-೧೬ ಅಂತರದಿಂದ ಮಣಿಸಿದರು. ಮಿಶ್ರ ಡಬಲ್ಸ್ ಜೋಡಿ ಧ್ರುವ್ ಕಪಿಲಾ ಮತ್ತು ತನಿಶಾ ಕ್ರಾಸ್ಟೊ, ಹಾಂಗ್‌ಕಾಂಗ್‌ನ ಟ್ಯಾಂಗ್ ಚುನ್ ಮ್ಯಾನ್ ಮತ್ತು ತ್ಸೆ ಯಿಂಗ್ ಸೂಟ್ ವಿರುದ್ಧ ನಿವೃತ್ತರಾದ ನಂತರ ಲಕ್ಷ್ಯ ಸೇನ್ ಕಣದಲ್ಲಿ ಉಳಿದಿರುವ ಏಕೈಕ ಭಾರತೀಯ ಆಟಗಾರರಾಗಿದ್ದಾರೆ.

<><><><>

ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್‌ನಲ್ಲಿ, ಭಾರತ ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯಲಿರುವ ಹೈವೋಲ್ಟೇಜ್ ಹಣಾಹಣಿಯಲ್ಲಿ ನ್ಯೂಜಿಲೆಂಡ್ ವಿರುದ್ಧ ಸೆಣಸಲಿದೆ. ಪಂದ್ಯ ನಾಳೆ ಸಂಜೆ ೭ ಗಂಟೆಗೆ ಆರಂಭವಾಗಲಿದೆ. ಸೂರ್ಯಕುಮಾರ್ ಯಾದವ್ ನೇತೃತ್ವದ ಹಾಲಿ ಚಾಂಪಿಯನ್ ಭಾರತ ತಂಡ, ಸೆಮಿಫೈನಲ್‌ನಲ್ಲಿ ಇಂಗ್ಲೆಂಡ್ ವಿರುದ್ಧ ೭ ರನ್‌ಗಳ ರೋಚಕ ಜಯ ಸಾಧಿಸಿದ ನಂತರ ಫೈನಲ್ ತಲುಪಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>